ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/01/ಆಆಶಾ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಅರಮನೆ ರಸ್ತೆ, ಬೆಂಗಳೂರು560001
ದಿನಾಂಕ: 30.08.2017.

## ಟಿಪ್ಪಣಿ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಕಾಲೇಜುಗಳಿಗೆ ವಿವಿಧ ವಿಷಯಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಸ್ಥಳನಿಯುಕ್ತಿ ಆದೇಶ ನೀಡಲಾಗಿದೆ. ಕಾಲೇಜು ಶಿಕ್ಷಣ ಇಲಾಖೆಯ ವರ್ಗಾವಣೆ ಅಧಿನಿಯಮದ ಪ್ರಕಾರ ಹೊಸದಾಗಿ ನೇಮಕಾತಿ ಆಗಿರುವ ಸಹಾಯಕ ಪ್ರಾಧ್ಯಾಪಕರುಗಳಿಂದ 'ಸಿ' ವಲಯ ಹಾಗೂ 'ಬಿ' ವಲಯಗಳನ್ನು ಭರ್ತಿ ಮಾಡಲಾಗಿರುತ್ತದೆ. ಪ್ರಸ್ತುತ 'ಎ, ಬಿ ಹಾಗೂ ಸಿ' ವಲಯಗಳಲ್ಲಿ ಹುದ್ದೆಗಳು ಖಾಲಿ ಉಳಿದಿರುತ್ತವೆ. ಈ ರೀತಿ ಕಾರ್ಯಭಾರವಿರುವ ಹುದ್ದೆಗಳಲ್ಲಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಕ್ರಮ ಕೈಗೊಳ್ಳತಕ್ಕದ್ದು. ಒಂದು ವೇಳೆ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಂಡಿರುವ ಆ ಹುದ್ದೆಗಳಿಗೆ ಖಾಯಂ ಉಪನ್ಯಾಸಕರು ನೇಮಕಾತಿಗೊಂಡಲ್ಲಿ ಸೇವಾ ಜೇಷ್ಠತೆಯಲ್ಲಿರುವ ಕಿರಿಯ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸತಕ್ಕದ್ದು.

30/8/17
ಆಯುಕ್ತರು
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ:**

ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಯನ್ನು:**

1) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2) ಹೆಚ್ಚುವರಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ಮುಖ್ಯ ಆಡಳಿತಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.